# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1077 (1220) |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ |
| ಉತ್ತರಿಸಬೇಕಾದ ದಿನಾಂಕ | : | 21.08.2025 |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿಗಳು |

<table>
<tr><th>ಕ್ರ. ಸಂ.</th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>ಅ)</td><td>ಕರ್ನಾಟಕ ಸರ್ಕಾರ ಅನುಚ್ಛೇದ 371(ಜೆ)ರಡಿ ಹೊರಡಿಸಲಾಗಿರುವ ಆದೇಶಗಳ ಅನುಷ್ಠಾನದ ಪ್ರಗತಿ ಪರಿಶೀಲನೆಯ ಬಗ್ಗೆ ರಚಿಸಲಾದ ಸಚಿವ ಸಂಪುಟ ಉಪಸಮಿತಿಯು ಎಷ್ಟು ಬಾರಿ ಸಭೆ ಮಾಡಲಾಗಿದೆ ಅನುಚ್ಛೇದ 371(ಜೆ) ಅನುಷ್ಠಾನದಿಂದ ಸರ್ಕಾರಿ ನೌಕರರಿಗೆ ಮುಂಬಡ್ತಿಯಲ್ಲಿ ಹಿನ್ನಡೆಯಾಗಿರುವ ಕುರಿತು ಎಷ್ಟು ದೂರುಗಳು ಬಂದಿವೆ;</td><td>ಕಲ್ಯಾಣ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗಾಗಿ ಭಾರತದ ಸಂವಿಧಾನದ ಅನುಚ್ಛೇದ 371 (ಜೆ)ರಡಿ ಹೊರಡಿಸಲಾಗಿರುವ ಆದೇಶಗಳ ಅನುಷ್ಠಾನದ ಪ್ರಗತಿ ಪರಿಶೀಲನೆಯ ಬಗ್ಗೆ ಪ್ರಸ್ತುತ ರಚಿಸಲಾಗಿರುವ ಸಚಿವ ಸಂಪುಟ ಉಪ ಸಮಿತಿಯು ಇದುವರೆವಿಗೆ 3 ಸಭೆಗಳನ್ನು ಈ ಕೆಳಕಂಡ ದಿನಾಂಕಗಳಂದು ನಡೆಸಿದೆ.<br><br>1. ದಿನಾಂಕ:17.08.2023<br>2. ದಿನಾಂಕ:04.01.2024<br>3. ದಿನಾಂಕ:10.03.2025<br><br>371(ಜೆ)ರಡಿಯಲ್ಲಿ ಮುಂಬಡ್ತಿ ಕುರಿತಂತೆ ಅಧಿಕಾರಿ/ನೌಕರರುಗಳಿಂದ 48 ದೂರುಗಳು ಸ್ವೀಕೃತವಾಗಿರುತ್ತವೆ.</td></tr>
<tr><td>ಆ)</td><td>ಇವುಗಳಲ್ಲಿ ಇತ್ಯರ್ಥವಾದ ಮತ್ತು ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು; (ವಿವರ ನೀಡುವುದು)</td><td>ಸ್ವೀಕೃತವಾಗಿರುವ 48 ದೂರು ಅರ್ಜಿಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಲಾಗಿದೆ. ವಿವಿಧ ಇಲಾಖೆಗಳು ಕೈಗೊಂಡಿರುವ ಕ್ರಮಗಳ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ.</td></tr>
<tr><td>ಇ)</td><td>ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ರಾಜ್ಯದ ಇತರೆ ಜಿಲ್ಲೆಗಳ ನೌಕರರಿಗೆ ಶೇಕಡಾ 20% ಮೀಸಲಾತಿ ಕಲ್ಪಿಸಿ, ಕಲ್ಯಾಣ ಕರ್ನಾಟಕ ಪ್ರದೇಶದವರಿಗೆ ರಾಜ್ಯದ ಇತರ ಜಿಲ್ಲೆಗಳಲ್ಲಿ ಮೀಸಲಾತಿ ನೀಡದೆ ಕೇವಲ ಬೆಂಗಳೂರು ನಗರಕ್ಕೆ ಮಾತ್ರ ಶೇಕಡ 8% ಮೀಸಲಾತಿ ಕಲ್ಪಿಸಿರುವುದರಿಂದ ಕಲ್ಯಾಣ ಕರ್ನಾಟಕ ಭಾಗದ ನೌಕರರಿಗೆ ನೇರ ನೇಮಕಾತಿ ಮತ್ತು ಮುಂಬಡ್ತಿಯಲ್ಲಿ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು;</td><td rowspan="2">ಭಾರತ ಸಂವಿಧಾನದ ಅನುಚ್ಛೇಧ 371(ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರ ಕಂಡಿಕೆ 3 ರಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿರುವ ಸಿವಿಲ್ ಸೇವಾ ಹುದ್ದೆಗಳಲ್ಲಿನ ಗ್ರೂಪ್-ಎ (ಕಿರಿಯ ಶ್ರೇಣಿ) ಮತ್ತು ಗ್ರೂಪ್-ಬಿ ಹುದ್ದೆಗಳಲ್ಲಿ ಶೇ 75 ರಷ್ಟು ಹುದ್ದೆಗಳನ್ನು, ಗ್ರೂಪ್-ಸಿ ಹುದ್ದೆಗಳಲ್ಲಿ ಶೇ 80 ರಷ್ಟು ಹಾಗೂ ಗ್ರೂಪ್-ಡಿ ಹುದ್ದೆಗಳಲ್ಲಿ ಶೇ 85ರಷ್ಟು ಹುದ್ದೆಗಳನ್ನು ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಮೇಲಿನ ಆದೇಶದ ಕಂಡಿಕೆ 13ರಲ್ಲಿ ರಾಜ್ಯ ಮಟ್ಟದ ಕಛೇರಿ ಮತ್ತು ಸಂಸ್ಥೆಗಳಲ್ಲಿನ ಎಲ್ಲಾ ವೃಂದದ ಹುದ್ದೆಗಳಲ್ಲಿ ಶೇ 8 ರಷ್ಟು ಹುದ್ದೆಗಳನ್ನು ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲು ಹಾಗೂ ಈ ರೀತಿ ಮೀಸಲಿರಿಸಿದ ಹುದ್ದೆಗಳ ಪ್ರತ್ಯೇಕ ಸ್ಥಳೀಯ ವೃಂದವನ್ನು ರಚಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ವಿವರ ಕೆಳಕಂಡಂತಿದೆ.<br><br><table><tr><th colspan="3">ಹೈದ್ರಾಬಾದ್-ಕರ್ನಾಟಕ ಪ್ರದೇಶ</th><th colspan="3">ರಾಜ್ಯಮಟ್ಟದ ಕಛೇರಿ/ಸಂಸ್ಥೆ</th></tr><tr><td rowspan="2">ಗ್ರೂಪ್ – ಎ & ಬಿ</td><td>LC</td><td>RPC</td><td rowspan="4">ಎಲ್ಲಾ ವೃಂದಗಳಲ್ಲಿ</td><td>LC</td><td>RPC</td></tr><tr><td>75%</td><td>25%</td><td rowspan="3">8%</td><td rowspan="3">92%</td></tr><tr><td>ಗ್ರೂಪ್ "ಸಿ"</td><td>80%</td><td>20%</td></tr><tr><td>ಗ್ರೂಪ್ "ಡಿ"</td><td>85%</td><td>15%</td></tr></table></td></tr>
<tr><td>ಈ)</td><td>ಕಲ್ಯಾಣ ಕರ್ನಾಟಕ ಪ್ರದೇಶದವರಿಗೆ ರಾಜ್ಯದ ಇತರ ಜಿಲ್ಲೆಗಳಲ್ಲಿ ಶೇಕಡಾ 8% ಮೀಸಲಾತಿ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;</td></tr>
</table>

| | | |
|---|---|---|
| | | ಮೇಲಿನಂತೆ ಮೀಸಲಾತಿಯನ್ನು ಅನುಚ್ಛೇಧ 371(ಜೆ)ಯನ್ನು ಜಾರಿಗೊಳಿಸುವ ಕುರಿತು ಹೊರಡಿಸಲು ಉದ್ದೇಶಿಸಲಾಗಿರುವ ಆದೇಶಗಳನ್ನು ಪರಿಶೀಲಿಸುವ ಸಲುವಾಗಿ ರಚಿಸಲಾಗಿದ್ದ ಸಚಿವ ಸಂಪುಟ ಉಪ ಸಮಿತಿಯ ಶಿಫಾರಸ್ಸಿನಂತೆ ಹೊರಡಿಸಲಾಗಿರುತ್ತದೆ.<br><br>ಪ್ರಸ್ತುತ ರಾಜ್ಯ ಮಟ್ಟದ ಕಛೇರಿ / ಸಂಸ್ಥೆಗಳನ್ನು ಹೊರತುಪಡಿಸಿ ಉಳಿದ ಜಿಲ್ಲೆಗಳಲ್ಲಿ ಶೇ 8ರಷ್ಟು ಮೀಸಲಾತಿಯನ್ನು ಒದಗಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಊ) | 2014ನೇ ಸಾಲಿನಲ್ಲಿ ರಚಿಸಲಾದ ಹೈದ್ರಾಬಾದ್ ಕರ್ನಾಟಕ ಅನುಷ್ಠಾನ ವಿಶೇಷ ಕೋಶ ರದ್ದುಗೊಂಡಿರುವುದು ಮರುಸ್ಥಾಪನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ? | 2013ರಲ್ಲಿ ಅನುಚ್ಛೇಧ 371(ಜೆ) ಅನುಷ್ಠಾನದ ವಿಷಯವನ್ನು ನಿರ್ವಹಿಸಲು ಸಿಆಸುಇ (ಹೈದ್ರಾಬಾದ್-ಕರ್ನಾಟಕ ವಿಶೇಷ ಕೋಶ)ವನ್ನು ಸೃಜಿಸಲಾಗಿತ್ತು, ನಂತರದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 393 ಸಆಸೇ 2021, ದಿನಾಂಕ 21.02.2022ರಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯದ ಸಿಆಸು ಇಲಾಖೆಯ ಅಧೀನದಲ್ಲಿದ್ದ ಹೈ-ಕ ವಿಶೇಷ ಕೋಶವು ನಿರ್ವಹಿಸುವ ವಿಷಯಗಳನ್ನು ಆಡಳಿತಾತ್ಮಕ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಕಲಬುರಗಿಗೆ ವರ್ಗಾಯಿಸಿ ಆದೇಶಿಸಲಾಗಿರುತ್ತದೆ. |

**ಸಿಆಸುಇ 102 ಹೈಕಕೋ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ